# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಸದಸ್ಯರ ಹೆಸರು:** | : **ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನ ಸಭೆಯಿಂದ ಚುನಾಯಿತರಾದವರು)** |
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : **563** |
| **ಉತ್ತರಿಸಬೇಕಾದ ದಿನಾಂಕ** | : **11.12.2025** |
| **ಉತ್ತರಿಸುವ ಸಚಿವರು** | : **ಗೃಹ ಸಚಿವರು** |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಕಳೆದ ಮೂರೂವರೆ ವರ್ಷಗಳಲ್ಲಿ ಅಂದಾಜು ಎರಡು ಲಕ್ಷಕ್ಕೂ ಹೆಚ್ಚು ಅಪಘಾತ ಪ್ರಕರಣಗಳು ಸಂಭವಿಸಿ ನಲವತ್ತು ಸಾವಿರಕ್ಕೂ ಹೆಚ್ಚು ಜನರು ಸಾವನ್ನಪ್ಪಿರುವ ಬಗ್ಗೆ ಎಸ್‌ಸಿಆರ್‌ಬಿಯು ವರದಿ ಪ್ರಕಟಿಸಿರುವುದು ನಿಜವೇ; | ಹೌದು. |
| (ಆ) | ನಿಜವಾದಲ್ಲಿ ಅಪಘಾತ ಮತ್ತು ಅಪಘಾತದಿಂದಾಗುವ ಸಾವುಗಳನ್ನು ತಡೆಗಟ್ಟುವುದಕ್ಕೆ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು; | ರಸ್ತೆ ಅಪಘಾತಗಳನ್ನು ತಡೆಗಟ್ಟಲು ಸರ್ಕಾರವು ಕೆಳಕಂಡ ಕ್ರಮಗಳನ್ನು ಕೈಗೊಂಡಿದೆ :-<br>➢ ಶಾಲಾ/ಕಾಲೇಜು ಮಕ್ಕಳಿಗೆ ಸಂಚಾರ ನಿಯಮಗಳು ಮತ್ತು ಅವುಗಳ ಪಾಲನೆಯ ಮಹತ್ವ ಹಾಗೂ ರಸ್ತೆ ಸುರಕ್ಷತೆ ಬಗ್ಗೆ ತಿಳುವಳಿಕೆ ನೀಡುವ ಕಾರ್ಯಕ್ರಮಗಳನ್ನು ನಿರಂತರವಾಗಿ ಹಮ್ಮಿಕೊಳ್ಳಲಾಗುತ್ತಿದೆ.<br>➢ ಸಾರ್ವಜನಿಕರಿಗೆ ಹಾಗೂ ವಾಹನ ಚಾಲಕರಿಗೆ ರಸ್ತೆ ನಿಯಮಗಳನ್ನು ಪಾಲಿಸುವಂತೆ ಜಾಗೃತಿ ಮೂಡಿಸಲಾಗುತ್ತಿದೆ.<br>➢ ಪಾದಚಾರಿಗಳ ಸುರಕ್ಷತಾ ಹಿತದೃಷ್ಟಿಯಿಂದ ಪಾದಚಾರಿ ರಸ್ತೆಗಳಲ್ಲಿ ಅನಧಿಕೃತವಾಗಿ ವಾಹನ ನಿಲುಗಡೆ ಮಾಡಿ ಸಂಚಾರ ನಿಯಮ ಉಲ್ಲಂಘನೆ ಮಾಡುತ್ತಿರುವವರ ವಿರುದ್ಧ ಮೋಟಾರು ವಾಹನ ಕಾಯ್ದೆ ರೀತ್ಯಾ ಪ್ರಕರಣಗಳನ್ನು ದಾಖಲಿಸಿ ಕ್ರಮ ಕೈಗೊಳ್ಳಲಾಗುತ್ತಿರುತ್ತದೆ.<br>➢ ಬೆಂಗಳೂರು ನಗರದಲ್ಲಿ ಪಾದಚಾರಿಗಳು ಎಲೆಂದರಲ್ಲೇ ರಸ್ತೆ ದಾಟಿ ಅಪಘಾತಗಳು ಸಂಭವಿಸುವುದನ್ನು ತಪ್ಪಿಸಲು ರಸ್ತೆಗಳ ಮಧ್ಯೆ ಎತ್ತರದ ಕಬ್ಬಿಣದ ಗ್ರಿಲ್‌ಗಳನ್ನು ಅಳವಡಿಸಲಾಗಿರುತ್ತದೆ, ಪಾದಚಾರಿಗಳ ಸುರಕ್ಷತಾ ದೃಷ್ಠಿಯಿಂದ ಅವಶ್ಯಕತೆ ಇರುವ ಲೇನ್ ಮಾರ್ಕಿಂಗ್, ಜೀಬ್ರಾ ಕ್ರಾಸಿಂಗ್, ಗ್ರಿಲ್ ಬ್ಯಾರಿಕೇಡ್ ಹಾಗೂ ಪೆಲಿಕಾನ್ ಸಿಗ್ನಲ್‌ಗಳನ್ನು ಹಾಗೂ ಸ್ಕೈವಾಕ್‌ಗಳನ್ನು ಅಳವಡಿಸಲಾಗಿರುತ್ತದೆ. |

- ಪಾದಚಾರಿಗಳು, ಪಾದಚಾರಿ ಮಾರ್ಗದಲ್ಲಿಯೇ ಸಂಚರಿಸುವ ಬಗ್ಗೆ ಪ್ರತಿಯೊಂದು ಜಂಕ್ಷನ್‌ಗಳಲ್ಲಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಗಳು ಅರಿವು ಮೂಡಿಸುವ ಕಾರ್ಯವು ಪ್ರಗತಿಯಲ್ಲಿರುತ್ತದೆ. ಬೆಂಗಳೂರು ನಗರದಲ್ಲಿ ವಾಹನ ಸವಾರರ ಸುರಕ್ಷತೆ ಹಾಗೂ ಸಂಚಾರ ನಿಯಮ ಪಾಲನೆ ಕುರಿತು ಸಂಚಾರ ನಿಯಮಗಳ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸಲಾಗುತ್ತಿದೆ.
- ಪಾದಚಾರಿಗಳ ಸುರಕ್ಷತಾ ದೃಷ್ಟಿಯಿಂದ ನಗರದಲ್ಲಿ ಪೆಲಿಕಾನ್ ಸಿಗ್ನಲ್ ಲೈಟ್‌ಗಳನ್ನು ಅಳವಡಿಸಲಾಗಿದ್ದು, ಸದರಿ ಸಿಗ್ನಲ್‌ಲೈಟನ್ನು ಬಳಸುವ ಹಾಗೂ ಅದರ ಉಪಯೋಗಗಳ ಕುರಿತು ಪಾದಚಾರಿಗಳಿಗೆ ಅರಿವು ಮೂಡಿಸುವ ಕಾರ್ಯವನ್ನು ಕೈಗೊಳ್ಳಲಾಗಿರುತ್ತದೆ.
- ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡುವ ಚಾಲಕ/ಸವಾರರುಗಳ ವಿರುದ್ಧ ಕಾನೂನಿನ ರೀತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.
- ರಸ್ತೆಯಲ್ಲಿ ಎಲ್ಲೆಂದರಲ್ಲಿ ನೋ ಪಾರ್ಕಿಂಗ್ ಸ್ಥಳಗಳಲ್ಲಿ ನಿಲುಗಡೆಯಾಗುತ್ತಿದ್ದ ವಾಹನಗಳಿಗೆ ವ್ಹೀಲ್‌ಕ್ಯಾಂಪ್ ಹಾಕಿ, ವಾಹನ ಸವಾರರು ಅಡ್ಡಾದಿಡ್ಡಿ ವಾಹನಗಳನ್ನು ಎಲ್ಲೆಂದರಲ್ಲಿ ನಿಲ್ಲಿಸದಿರುವಂತೆ ಕಾನೂನು ರೀತಿಯ ಕ್ರಮ ವಹಿಸಲಾಗುತ್ತಿದೆ.
- ರಸ್ತೆ ಅಪಘಾತಗಳ ವೈಜ್ಞಾನಿಕ ತನಿಖೆಯನ್ನು ಜಂಟಿಯಾಗಿ ನಡೆಸಲು, ಆರ್.ಟಿ.ಓ ಅಧಿಕಾರಿಗಳು ಹಾಗೂ ಬಿ.ಬಿ.ಎಂ.ಪಿ ಅಧಿಕಾರಿಗಳೊಂದಿಗೆ ತನಿಖೆಯನ್ನು ಮಾಡಿ ಅಪಘಾತಗಳಿಗೆ ವೈಜ್ಞಾನಿಕ ಕಾರಣಗಳನ್ನು ಕಂಡುಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ.
- ರಸ್ತೆ ಅಪಘಾತಗಳಿಗೆ ಕಾರಣವಾಗಬಹುದಾದ, ಪಾಟ್‌ಹೋಲ್ಸ್‌ಗಳು, ವೈಜ್ಞಾನಿಕ ರಸ್ತೆ ಉಬ್ಬುಗಳು ಹಾಗೂ ಇತರೆ ಪ್ರಮುಖ ಕಾರಣಗಳನ್ನು ಗುರುತಿಸಿ, ಸದರಿ ಕಾಮಗಾರಿಗಳನ್ನು ತ್ವರಿತವಾಗಿ ಕೈಗೊಳ್ಳುವಂತೆ ಬಿ.ಬಿ.ಎಂ.ಪಿ. ಯವರಿಗೆ ಪಟ್ಟಿ ಮಾಡಿ ಮಾಹಿತಿಯನ್ನು ರವಾನಿಸಲಾಗಿರುತ್ತದೆ.
- 2022, 2023 ಮತ್ತು 2024ನೇ ಸಾಲಿಗೆ ಅನ್ವಯವಾಗುವಂತೆ ಪದೇ ಪದೇ ರಸ್ತೆ ಅಪಘಾತಗಳು ಸಂಭವಿಸುವ ಒಟ್ಟು 63 ಬ್ಲಾಕ್‌ಸ್ಪಾಟ್‌ಗಳನ್ನು ಗುರುತಿಸಲಾಗಿದ್ದು, ಸದರಿ ಬ್ಲಾಕ್‌ಸ್ಪಾಟ್‌ಗಳಲ್ಲಿ ರಸ್ತೆ ಅಪಘಾತಗಳಿಗೆ ಸಾಮಾನ್ಯ ಕಾರಣಗಳು ಏನು? ಎಂಬ ಬಗ್ಗೆ ವಿಮರ್ಶೆಯನ್ನು ನಡೆಸಿ, ಸದರಿ ಸ್ಥಳಗಳಲ್ಲಿ ಅಪಘಾತಗಳನ್ನು ತಡೆಗಟ್ಟಲು ಕೈಗೊಳ್ಳಬೇಕಾದ ಕ್ರಮಗಳು ಹಾಗೂ ಕೈಗೊಳ್ಳಬೇಕಾದ ಕಾಮಗಾರಿಗಳ ಬಗ್ಗೆ ಇತರೆ ಪೌರಸಂಸ್ಥೆಯ ಅಧಿಕಾರಿಗಳೊಂದಿಗೆ ಚರ್ಚೆಯನ್ನು ನಡೆಸಿ ಮಾಹಿತಿಯನ್ನು ಸಂಬಂಧಪಟ್ಟ ಇಲಾಖೆಗೆ ಸಲ್ಲಿಸಲು ಕ್ರಮ ಕೈಗೊಂಡಿರುತ್ತದೆ. ಹಾಗೂ ಪ್ರತಿ ಮೂರು ತಿಂಗಳಿಗೊಮ್ಮೆ ಕೈಗೊಳ್ಳಲಾಗುವ ಬೆಂಗಳೂರು ನಗರ ಜಿಲ್ಲಾ ಮಟ್ಟದ ರಸ್ತೆ ಸುರಕ್ಷತಾ ಸಮಿತಿ ಸಭೆಯಲ್ಲಿ ಬ್ಲಾಕ್‌ಸ್ಪಾಟ್‌ಗಳಲ್ಲಿ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ ಪ್ರಗತಿ ಪರಿಶೀಲನೆಯನ್ನು ನಡೆಸಲಾಗುತ್ತಿದೆ.
- ವಿವಿಧ ಮಾದರಿಯ ವಾಹನಗಳ ಚಾಲಕರು/ ಸವಾರರಿಗೆ ಸಂಚಾರ

| | | |
|---|---|---|
| | | ನಿಯಮಗಳು ಮತ್ತು ಅವುಗಳ ಪಾಲನೆಯ ಮಹತ್ವವನ್ನು ತಿಳಿಸಲು ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಆ ಮೂಲಕ ಸಂಚಾರ ನಿಯಮಗಳ ಬಗ್ಗೆ ಅರಿವು ಮೂಡಿಸಿ ರಸ್ತೆ ಅಪಘಾತಗಳನ್ನು ಕಡಿಮೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಸಾರ್ವಜನಿಕರು ತಮ್ಮ ದಿನ ನಿತ್ಯದ ಓಡಾಟಕ್ಕೆ ಸಾರ್ವಜನಿಕ ಸಾರಿಗೆಗಳಾದ ಬಿ.ಎಂ.ಟಿ.ಸಿ ,ಕೆ.ಎಸ್.ಆರ್.ಟಿ.ಸಿ ಬಸ್ಸುಗಳು, ಮೆಟ್ರೋ ರೈಲು, ರೈಲುಗಳನ್ನು ಹೆಚ್ಚಾಗಿ ಬಳಸುವಂತೆ ತಿಳುವಳಿಕೆ ಮೂಡಿಸುವ ಮತ್ತು ಅದಕ್ಕಾಗಿ ಪ್ರಚಾರಗಳನ್ನು ಕೈಗೊಂಡು ವಾಹನ ದಟ್ಟಣೆಯನ್ನು ಕಡಿಮೆ ಮಾಡಿ ರಸ್ತೆ ಅಪಘಾತಗಳನ್ನು ನಿಯಂತ್ರಣಕ್ಕೆ ತರಲು ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ದ್ವಿ ಚಕ್ರ ವಾಹನ ಸವಾರರು ಗುಣಮಟ್ಟದ ಹೆಲ್ಮೆಟ್ ಧರಿಸುವಂತೆ ಮತ್ತು ವಾಹನಗಳನ್ನು ಸುರಕ್ಷಿತವಾಗಿ ಚಾಲನೆ ಮಾಡುವ ಬಗ್ಗೆ ತಿಳುವಳಿಕೆ ನೀಡಲು ಕ್ರಮ ಕೈಗೊಳ್ಳಲಾಗಿರುತ್ತದೆ.<br>➢ ಎಲೆಕ್ಟ್ರಾನಿಕ್ ಮಾಧ್ಯಮಗಳ ಮೂಲಕ ಸಂಚಾರ ನಿಯಮಗಳ ಪಾಲನೆಯ ಮಹತ್ವ ಮತ್ತು ರಸ್ತೆ ಸುರಕ್ಷತೆ ಕುರಿತು ಅರಿವನ್ನು ಮೂಡಿಸಿ ರಸ್ತೆ ಅಪಘಾತಗಳ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಹೆಚ್ಚು ರಸ್ತೆ ಅಪಘಾತಗಳು ಸಂಭವಿಸುವ ಸ್ಥಳಗಳಲ್ಲಿ 2 ಪಾಳಿಯಲ್ಲಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ವಾಹನಗಳ ಸುಗಮ ಸಂಚಾರ ನಿರ್ವಹಣೆ ಕರ್ತವ್ಯಕ್ಕೆ ನೇಮಿಸಲು ಹಾಗೂ ಅಗತ್ಯ ಸೂಚನಾ ಫಲಕಗಳನ್ನುಅಳವಡಿಸಲು ಕ್ರಮ ಕೈಗೊಂಡಿರುತ್ತದೆ.<br>➢ ಬೆಂಗಳೂರು ಸಂಚಾರ ವಿಭಾಗದಿಂದ ಸಂಚಾರ ನಿರ್ವಹಣಾ ಕೇಂದ್ರದಲ್ಲಿ 2023 ರಲ್ಲಿ 1850, 2024 ರಲ್ಲಿ 9619 ಹಾಗೂ 2025 ರಲ್ಲಿ9010 ಬಿ.ಎಂ.ಟಿ.ಸಿ. ವಾಹನ ಚಾಲಕರುಗಳಿಗೆ ಅಪಘಾತಗಳನ್ನು ತಡೆಗಟ್ಟುವ ದೃಷ್ಠಿಯಿಂದ ರಸ್ತೆಗಳಲ್ಲಿ ವಾಹನ ಚಾಲನೆ ಮಾಡುವಾಗ ಅನುಸರಿಸಬೇಕಾದ ಕ್ರಮಗಳ ಬಗ್ಗೆ ತರಬೇತಿಯನ್ನು ಆಯೋಜಿಸಿ, ತರಬೇತಿಯನ್ನು ನೀಡಲಾಗಿದ್ದು, ಈ ತರಬೇತಿಯನ್ನು ನಿರಂತರವಾಗಿ ಮುಂದುವರೆಸಲಾಗಿರುತ್ತದೆ.<br>➢ ರಸ್ತೆ ಅಪಘಾತಗಳ ನಿಯಂತ್ರಣಕ್ಕಾಗಿ ಹಾಗೂ ಅವುಗಳಿಗೆ ಕಾರಣವಾಗುವ ಪ್ರಮುಖ ಸಂಚಾರ ನಿಯಮ ಉಲ್ಲಂಘನೆಗಳಾದ ಮದ್ಯಪಾನ ಮಾಡಿ ವಾಹನ ಚಾಲನೆ ಹೆಲ್ಮೆಟ್ ರಹಿತ ಚಾಲನೆ, ಹಾಗೂ ಇನ್ನಿತರೆ ಗುಣಾತ್ಮಕ ಪ್ರಕರಣ ಬಗ್ಗೆ ವಿಶೇಷ ಕಾರ್ಯಚರಣೆಯನ್ನು ಹಮ್ಮಿಕೊಂಡು ರಸ್ತೆ ಅಪಘಾತ ನಿಯಂತ್ರಣ ಮಾಡಲಾಗುತ್ತಿದೆ.<br>➢ ರಸ್ತೆಯ ಹಾಗೂ ಸಿಗ್ನಲ್ ದೀಪಗಳ ಬದಿಗಳಲ್ಲಿ ಬೆಳೆದು ನಿಂತಿರುವ ಮರದ ಕೊಂಬೆಗಳನ್ನು ತೆರವುಗೊಳಿಸಿ ವಾಹನ ಸವಾರ/ಚಾಲಕರಿಗೆ ರಸ್ತೆಯು ಸ್ಪಷ್ಟವಾಗಿ ಗೋಚರಿಸುವಂತೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಸಿ.ಬಿ.ಡಿ. ಏರಿಯಾವನ್ನು ವಿಸ್ತಾರಗೊಳಿಸಿ ಆದ್ಯತೆಯ ಮೇರೆಗೆ ರಸ್ತೆ ಸುರಕ್ಷತೆ ಮತ್ತು ಸುಗಮ ಸಂಚಾರದ ದೃಷ್ಟಿಯಿಂದ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಅಧ್ಯಯನ ನಡೆಸಲಾಗುತ್ತಿದೆ.<br>➢ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ಎಕ್ಸ್, ಯೂಟ್ಯೂಬ್ ಹಾಗೂ ಇನ್‌ಸ್ಟಾಗ್ರಾಮ್‌ಗಳ ಮೂಲಕ ಸಂಚಾರ ನಿಯಮಗಳ ಪಾಲನೆಯ |

ಮಹತ್ವದ ಬಗ್ಗೆ ಸಂದೇಶಗಳನ್ನು ರವಾನಿಸುವ ಹಾಗೂ ನಿಯಮ ಪಾಲನೆಯ ಬಗ್ಗೆ ಪೋಸ್ಟರ್‌ಗಳನ್ನು ಅಪ್‌ಲೋಡ್ ಮಾಡಲು ಕ್ರಮ ಕೈಗೊಂಡಿರುತ್ತದೆ.

- ಪ್ರತಿ ಠಾಣಾ ವ್ಯಾಪ್ತಿಯಲ್ಲಿರುವ ಶಾಲೆಗಳಿಗೆ ಎಸ್.ಎ.ಆರ್.ಎ ಯೋಜನೆಯಡಿಯಲ್ಲಿ ಖುದ್ದು ಶಾಲೆಗಳಿಗೆ ಭೇಟಿ ಕೊಟ್ಟು ರಸ್ತೆ ನಿಯಮಗಳ ಪಾಲನೆ ಹಾಗೂ ಅವುಗಳ ಮಹತ್ವದ ಬಗ್ಗೆ ಅರಿವು ಮೂಡಿಸಲು ಅಗತ್ಯ ಅಧಿಕಾರಿ ಹಾಗೂ ಸಿಬ್ಬಂದಿಗಳ ನೇಮಕ ಮಾಡಿ ತರಬೇತಿಯನ್ನು ನೀಡಲಾಗಿರುತ್ತದೆ.
- ಸೆಂಟ್ ಮಾರ್ಕ್ ರಸ್ತೆಯಲ್ಲಿರುವ ಟ್ರಾಫಿಕ್ ಪಾರ್ಕ್‌ನಲ್ಲಿ ವಿವಿಧ ಬಗ್ಗೆಯ ವಾಹನಗಳ ಚಾಲಕರು ಹಾಗೂ ಶಾಲಾ ಮಕ್ಕಳಿಗೆ ರಸ್ತೆ ನಿಯಮಗಳ ಬಗ್ಗೆ ಅರಿವು ಮೂಡಿಸಲು ತರಬೇತಿಯನ್ನು ಆಯೋಜಿಸಲಾಗುತ್ತಿದೆ.
- ಹೆಚ್ಚು ರಸ್ತೆ ಅಪಘಾತಗಳು ಸಂಭವಿಸುವ ಸ್ಥಳಗಳನ್ನು ಗುರುತಿಸಿ ಅಗತ್ಯ ಕೋಬ್ರಾ ಸಿಬ್ಬಂದಿಗಳನ್ನು ಗಸ್ತು ಕರ್ತವ್ಯಕ್ಕೆ ನೇಮಕ ಮಾಡಲಾಗಿದ್ದು, ಇನ್ನೂ ಹೆಚ್ಚಿನ ಗಸ್ತು ಸಿಬ್ಬಂದಿಗಳನ್ನು ನೇಮಕ ಮಾಡಿ ಅಪಘಾತಗಳನ್ನು ತಡೆಗಟ್ಟಲು ಕ್ರಮ ವಹಿಸಲಾಗುತ್ತಿದೆ.
- ರಸ್ತೆ ಸುರಕ್ಷತೆ ಹಾಗೂ ಸಂಚಾರ ನಿಯಮ ಪಾಲನೆಯ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಹೆಚ್ಚಿನ ಕಾರ್ಯ ಕ್ರಮಗಳನ್ನು ಆಯೋಜಿಸಲು ಕ್ರಮ ವಹಿಸಲಾಗುತ್ತಿದೆ.
- ಅತಿ ವೇಗದ ಚಾಲನೆ, ಮದ್ಯಪಾನ ಮಾಡಿ ವಾಹನ ಚಾಲನೆ, ವಾಹನ ಚಲಾಯಿಸುವಾಗ ಮೊಬೈಲ್ ಬಳಕೆ, ಸಿಗ್ನಲ್ ಜಂಪ್ ನಿಯಮ ಉಲ್ಲಂಘನೆಗಳಲ್ಲಿ ಚಾಲನಾ. ಅನುಜ್ಞಾ ಪತ್ರಗಳನ್ನು ಮುಟ್ಟುಗೋಲು ಹಾಕುವ ಸಲುವಾಗಿ ಅಮಾನತ್ತಿಗಾಗಿ ಸಂಬಂಧಪಟ್ಟ ಆರ್.ಟಿ.ಓ ಕಛೇರಿಗೆ ಕಳುಹಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಕಳೆದ ವರ್ಷಗಳಲ್ಲಿ ಸಂಭವಿಸಿರುವ ಮಾರಣಾಂತಿಕ ರಸ್ತೆ ಅಪಘಾತಗಳು ಹಾಗೂ ಸದರಿ ರಸ್ತೆ ಅಪಘಾತಗಳು ಸಂಭವಿಸಲು ಕಾರಣವಾಗಿರುವ ಅಂಶಗಳ ಬಗ್ಗೆ ವಿಮರ್ಶೆಯನ್ನು ಕೈಗೊಂಡು, ಅಪಘಾತಗಳನ್ನು ತಡೆಗಟ್ಟಲು ಕ್ರಮ ಕೈಗೊಳ್ಳಲು ವಿಭಾಗ ಮಟ್ಟದಲ್ಲಿ ಎಲ್ಲಾ ಅಧಿಕಾರಿಗಳಿಗೆ ಸೂಚನೆಯನ್ನು ನೀಡಲಾಗಿರುತ್ತದೆ.
- ಸಂಚಾರ ಮಾದರಿಗಳು ಮತ್ತು ಅಪಘಾತ ತಡೆಗಟ್ಟುವ ವಿಧಾನಗಳ ಕುರಿತು ಆಳವಾದ ಅಧ್ಯಯನಗಳನ್ನು ನಡೆಸಲು ಸಂಚಾರ ಪೊಲೀಸರು ಸ್ಥಳೀಯ ವಿಶ್ವವಿದ್ಯಾಲಯಗಳು ಮತ್ತು ಸಂಶೋಧನಾ ಸಂಸ್ಥೆಗಳೊಂದಿಗೆ ಪಾಲುದಾರಿಕೆ ಹೊಂದಿದ್ದು, ಈ ಸಹಯೋಗವು ರಸ್ತೆ ಸುರಕ್ಷತೆಯ ಮೇಲೆ ನೇರವಾಗಿ ಪರಿಣಾಮ ಬೀರುವ ಪುರಾವೆ ಆಧಾರಿತ ನೀತಿಗಳು ಮತ್ತು ಮಧ್ಯಸ್ಥಿಕೆಗಳನ್ನು ರಚಿಸಲು ಸಹಾಯ ಮಾಡುತ್ತಿದೆ.
- ಬೆಂಗಳೂರು ಸಂಚಾರ ಪೊಲೀಸ್ ವಿಭಾಗವು ಸಂಚಾರ ಸುರಕ್ಷತಾ ಕಾರ್ಯ ಕ್ರಮಗಳ ಪರಿಣಾಮಕಾರಿತ್ವವನ್ನು ಮೌಲ್ಯ ಮಾಪನ ಮಾಡಲು ಸರ್ಕಾರಿ ಸಂಸ್ಥೆಗಳು, ಸರ್ಕಾರೇತರ ಸಂಸ್ಥೆಗಳು ಮತ್ತು ಸಂಶೋಧನಾ ಸಂಸ್ಥೆಗಳೊಂದಿಗೆ ನಿಕಟವಾಗಿ ಕೆಲಸ ಮಾಡುತ್ತಿದ್ದು, ಈ ಸಹಯೋಗವು ಇತ್ತೀಚಿನ ಸಂಶೋಧನೆ ಮತ್ತು ಉತ್ತಮ ಅಭ್ಯಾಸಗಳ ಆಧಾರದ ಮೇಲೆ

| | | |
|---|---|---|
| | | ಸಮಗ್ರ ರಸ್ತೆ ಸುರಕ್ಷತಾ ತಂತ್ರಗಳ ಅಭಿವೃದ್ಧಿಗೆ ಕಾರಣವಾಗಿರುತ್ತದೆ.<br>➢ ಸ್ಮಾರ್ಟ್ ಟ್ರಾಫಿಕ್ ಸಿಗ್ನಲ್‌ಗಳು ಮತ್ತು ಹೊಂದಾಣಿಕೆಯ ಸಂಚಾರ ನಿಯಂತ್ರಣದೊಂದಿಗೆ ಸುಸಜ್ಜಿತವಾದ ಐ.ಟಿ.ಎಂ.ಎಸ್. ವ್ಯವಸ್ಥೆಯ ಪರಿಚಯವು ಸಂಚಾರ ಹರಿವನ್ನು ಗಮನಾರ್ಹವಾಗಿ ಸುಧಾರಿಸಿದ್ದು, ಇದು ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಲು ಸಹಕಾರಿಯಾಗಿದೆ. ಸಂಚಾರ ಪರಿಸ್ಥಿತಿಗಳನ್ನು ಮೇಲ್ವಿಚಾರಣೆ ಮಾಡಲು ಮತ್ತು ಸಿಗ್ನಲ್ ಸಮಯವನ್ನು ಕ್ರಿಯಾತ್ಮಕವಾಗಿ ಹೊಂದಿಸಲು ನೈಜ-ಸಮಯದ ಡೇಟಾ ವಿಶ್ಲೇಷಣೆಯನ್ನು ಬಳಸಲಾಗುತ್ತಿದ್ದು, ಇದು ವಿಶೇಷವಾಗಿ ಜಂಕ್ಷನ್‌ಗಳಲ್ಲಿ ಅಪಘಾತಗಳ ಸಾಧ್ಯತೆಯನ್ನು ಕಡಿಮೆ ಮಾಡಿದೆ.<br><br>ಬೆಂಗಳೂರು ನಗರದಲ್ಲಿ ಸಾರ್ವಜನಿಕರಿಗೆ ರಸ್ತೆ ನಿಯಮಗಳು ಮತ್ತು ಅವುಗಳ ಪಾಲನೆಯ ಬಗ್ಗೆ ಅರಿವು ಮೂಡಿಸುವ ಭಾಗವಾಗಿ **"ಒಂದು ದಿನದ ಮಟ್ಟಿಗೆ ಪೊಲೀಸ್"** ಎಂಬ ಉಪಕ್ರಮವನ್ನು ಪ್ರಾರಂಭಿಸಿ, ಈ ಉಪಕ್ರಮದಲ್ಲಿ ಸಾರ್ವಜನಿಕರು ಒಂದು ದಿನದ ಮಟ್ಟಿಗೆ ಸಂಚಾರ ಪೊಲೀಸ್ ಆಗಿ ಸೇವೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಇದರಿಂದ ಸಾರ್ವನಿಕರಿಗೆ ಸಂಚಾರ ಪೊಲೀಸರ ದೈನಂದಿನ ಕರ್ತವ್ಯದ ಬಗ್ಗೆ ಅರಿವು ಮೂಡುವುದಲ್ಲದೇ, ಸಂಚಾರ ನಿಯಮಗಳು ಹಾಗೂ ಅವುಗಳನ್ನು ಪಾಲಿಸುವುದರ ಮಹತ್ವದ ಬಗ್ಗೆ ಅರಿವು ಮೂಡಲಿದೆ. |
| (ಇ) | ರಾಜ್ಯ ಸರ್ಕಾರ ಅಪಘಾತ ವಲಯ ಅಥವಾ ಬ್ಲಾಕ್ ಸ್ಪಾಟ್‌ಗಳನ್ನು ಗುರುತಿಸಿ, ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿಗಳಲ್ಲಿರುವ ನ್ಯೂನತೆಗಳನ್ನು ಸರಿಪಡಿಸಲು ಕ್ರಮ ಕೈಗೊಂಡಿದೆಯೇ? | ರಾಜ್ಯದಲ್ಲಿನ ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿಗಳಲ್ಲಿ 2022, 2023 & 2024ನೇ ಸಾಲಿನಲ್ಲಿ ಪೊಲೀಸ್ ಇಲಾಖೆಯಿಂದ ಒಟ್ಟು 796 ಕಪ್ಪು ಸ್ಥಳಗಳನ್ನು(Black Spot) ಗುರುತಿಸಿದ್ದು, ಸದರಿ ಕಪ್ಪು ಸ್ಥಳಗಳನ್ನು ಸರಿಪಡಿಸುವಂತೆ ಅಪರ ಆಯುಕ್ತರು, ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರಕ್ಕೆ ಕಳುಹಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ: ಹೆಚ್‌ಡಿ 559 ಎಸ್‌ಎಸ್‌ಟಿ 2025**

**(ಡಾ.ಜಿ.ಪರಮೇಶ್ವರ)**
**ಗೃಹ ಸಚಿವರು**